ಮೆಡಿಕಲ್ ಕಾಲೇಜು ಮಂಜೂರಾತಿ

416(667); ಶ್ರೀ ಬಣಕಾರ್ ಯು.ಬಿ.

ಅ) ಹಾವೇರಿ ಜಿಲ್ಲಾ ಕೇಂದ್ರಕ್ಕೆ ಅವಶ್ಯವಾಗಿರುವ ಮೆಡಿಕಲ್ ಕಾಲೇಜು ಸ್ಥಾಪನೆಗೆ ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು?

ಡಾ॥ ಶರಣ ಪ್ರಕಾಶ್ ಆರ್. ಪಾಟೀಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) 2014–15 ನೇ ಸಾಲಿನ ಆಯವ್ಯಯದ ಘೋಷಣೆಯನ್ವಯ ಹಾವೇರಿಯಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಸರ್ಕಾರವು ಮಂಜೂರಾತಿ ಆದೇಶವನ್ನು ಹೊರಡಿಸಿರುತ್ತದೆ.

ಹಾವೇರಿಯಲ್ಲಿ ವೈದ್ಯಕೀಯ ಕಾಲೇಜಿನ ಪ್ರಾರಂಭಕ್ಕೆ ಎಂಸಿಐ ನಿಯಮಗಳನ್ವಯ ಅಗತ್ಯವಿರುವ ಭೂಮಿ, ಕಟ್ಟಡ ಹಾಗೂ ಇನ್ನಿತರೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದ್ದು, ಸಂಬಂಧಿತ ಎಲ್ಲಾ ದಾಖಲೆಗಳೊಂದಿಗೆ ಅರ್ಜಿಯನ್ನು ಭಾರತೀಯ ವೈದ್ಯಕೀಯ ಪರಿಷತ್ತಿಗೆ ಸಲ್ಲಿಸಲು ಕ್ರಮವಹಿಸಲಾಗುವುದು. ಭಾರತೀಯ ವೈದ್ಯಕೀಯ ಪರಿಷತ್ತಿನ ಅನುಮತಿಯನ್ನು ಆಧರಿಸಿ, 2016–17ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಇಲ್ಲಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಪರಿಶೀಲಿಸಲಾಗುವುದು.

ಗ್ರಾಮಗಳಿಗೆ ಪಡಿತರ ವಿತರಣಾ ಕೇಂದ್ರ

417(668); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಪ್ರತಿ ಗ್ರಾಮಗಳಲ್ಲಿ ಪಡಿತರ ವಿತರಣಾ ಕೇಂದ್ರಗಳು ಇಲ್ಲದೇ ಇರುವುದರಿಂದ ಬಡವರಿಗೆ ಪಡಿತರ ಆಹಾರ ಧಾನ್ಯ ಪಡೆಯಲು ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;